ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ
"ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)
Visvesvaraya Technological University
(State University of Government of Karnataka Established as per the VTU Act, 1994)

ಡಾ. ಪ್ರಸಾದ ಬಿ. ರಾಂಪುರೆ ಎಮ್.ಇ., ಪಿಹೆಚ್.ಡಿ.
ಕುಲಸಚಿವರು

ದೂರವಾಣಿ ಸಂ: (0831) – 2498100
ಫ್ಯಾಕ್ಸ್ ಸಂ : (0831) – 2405467

ಉಲ್ಲೇಖ ಸಂ.: ವಿತಾವಿ/ಪಿಎಸ್/2026-27/ 138

ದಿನಾಂಕ: 5 NOV 2026

ಸುತ್ತೋಲೆ

ವಿಷಯ: ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ KPSC, KEA ಹಾಗೂ ಇತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಆನ್‌ಲೈನ್ ತರಬೇತಿ ಯೋಜನೆಯನ್ನು ಪ್ರಚುರ ಪಡಿಸುವ ಕುರಿತು.

ಉಲ್ಲೇಖ: ಸರ್ಕಾರದ ಉಪ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಇಡಿ 103 ಅಅವಿ 2026, ದಿನಾಂಕ 05.11.2026

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಲೋಕಸೇವಾ ಆಯೋಗ (KPSC), ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಹಾಗೂ ಇತರ ಆಯ್ಕೆ ಪ್ರಾಧಿಕಾರಿಗಳ ವತಿಯಿಂದ ನಡೆಸಲಾಗುವ GP, FDA, SDA, PDO, PSI, Teachers ಸೇರಿದಂತೆ ಇತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಲು ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಮಾನ್ಯಮುಖ್ಯಮಂತ್ರಿಯವರ 100 ದಿನಗಳ ಯೋಜನೆಯಡಿ **"ಮುಖ್ಯಮಂತ್ರಿಯವರ ವಿದ್ಯಾರ್ಥಿ ಸಹಾಯ ಹಸ್ತ ಯೋಜನೆ"** ರಾಜ್ಯದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ ಉಚಿತವಾಗಿ ಆನ್‌ಲೈನ್ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಸಂಬಂಧ ಆನ್‌ಲೈನ್ ಅರ್ಜಿ ಕರೆಯಲಾಗಿದೆ.

ಈ ಕುರಿತಂತೆ, ಆಸಕ್ತ ಅಭ್ಯರ್ಥಿಗಳು ಯಾವುದೇ 3 ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿಯನ್ನು ಪಡೆಯಬಹುದಾಗಿದ್ದು, ಅರ್ಜಿಗಳನ್ನು ಸೇವಾ ಒನ್: https://sevaone.karnataka.gov.in ಮೂಲಕ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸೇವಾಒನ್ ಸಹಾಯವಾಣಿ: 080-24410574 ಇವರನ್ನು ಸೋಮವಾರ ದಿಂದ ಶನಿವಾರ ಬೆಳಗ್ಗೆ 9 ರಿಂದ ಸಂಜೆ 6 ರವರೆಗೆ (ಸರ್ಕಾರಿ ರಜಾದಿನಗಳನ್ನು ಹೊರತುಪಡಿಸಿ) ಸಂಪರ್ಕಿಸಬಹುದಾಗಿದೆ.

ಮುಂದುವರೆದು, ತಾವು ದಯವಿಟ್ಟು ಸದರಿ ಸುತ್ತೋಲೆಯ ವಿಷಯವನ್ನು ತಮ್ಮ ಮಹಾವಿದ್ಯಾಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ, ಪ್ರಮುಖವಾಗಿ 2025-26 ರಲ್ಲಿ ಪದವಿ ಮುಗಿಸಿದಂತಹ ವಿದ್ಯಾರ್ಥಿಗಳಿಗೆ ಮತ್ತು 2026-27ರಲ್ಲಿ ಕೊನೆಯ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಹಾಗೂ ಹಳೆಯ ವಿದ್ಯಾರ್ಥಿಗಳ ಸಂಘ (Alumni Associations) ಗಳಿಗೆ ಗಮನಕ್ಕೆ ತರಲು ಹಾಗೂ ಮಹಾವಿದ್ಯಾಲಯದ ಎಲ್ಲಾ ಸಾಮಾಜಿಕ ಮಾಧ್ಯಮ ಜಾಲತಾಣಗಳಲ್ಲಿ (You Tube, Facebook, Whatsapp, Facebppl, Twitter ಇತ್ಯಾದಿ) ಪ್ರಚುರಪಡಿಸುವಂತೆ ಈ ಮೂಲಕ ಸೂಚಿಸಲಾಗಿದೆ.

Raw/05/11/26
ಕುಲಸಚಿವರು

ಇವರಿಗೆ,

1) ಪ್ರಾಚಾರ್ಯರು, ವಿ.ತಾ.ವಿ.ಯ ಘಟಕ, ಎಲ್ಲ ಸಂಯೋಜನಹೊಂದಿದ ಹಾಗೂ ಸ್ವಾಯತ್ತ ತಾಂತ್ರಿಕ ಮಹಾವಿದ್ಯಾಲಯಗಳು ಹಾಗೂ ಸ್ಕೂಲ್ ಆಫ್ ಆರ್ಕಿಟೆಕ್ಚರ್.
2) ಎಲ್ಲ ವಿಭಾಗಗಳ ಚೇರ್‌ಪರಸನ್ಸ್/ಪ್ರೋಗ್ರಾಮ್ ಕೋರ್ಡಿನೇಟರ್ ಸ್ನಾತಕೋತ್ತರ ಕೇಂದ್ರ, ವಿ.ತಾ.ವಿ, ಮುದ್ದೇನಹಳ್ಳಿ, ಬೆಳಗಾವಿ, ಕಲಬುರಗಿ ಮತ್ತು ಮೈಸೂರು.

ಪ್ರತಿ ಇವರಿಗೆ,

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ, ಅವರ ಕಾರ್ಯದರ್ಶಿಗಳ ಮುಖಾಂತರ.
2. ಪ್ರಾದೇಶಿಕ ನಿರ್ದೇಶಕರು (ಪ್ರಭಾರಿ), ವಿ.ತಾ.ವಿ.ಯ ಬೆಂಗಳೂರು, ಬೆಳಗಾವಿ, ಕಲಬುರಗಿ ಹಾಗೂ ಮೈಸೂರು ಪ್ರಾದೇಶಿಕ ಕೇಂದ್ರಗಳು.